ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ,

## ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ-562101

**Email id: dhochikballapur@gmail.com** **Ph.No: 08156-277034**

ಸಂಖ್ಯೆ: ಜಿಆಕುಕ/ಚಿಪುರ/ಸರಬ/04/2024-25 (E-Office No: 68645) ದಿನಾಂಕ: **24.08.2026**

## -:ಅಧಿಸೂಚನೆ:-

ವಿಷಯ: **ಚಿಕ್ಕಬಳ್ಳಾಪುರ ಜಿಲ್ಲೆಯ ಆರೋಗ್ಯ ಇಲಾಖೆಯಲ್ಲಿ ಮಂಜೂರಾಗಿ ಖಾಲಿ ಇರುವ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿರುವ ಬಗ್ಗೆ.**

**ಉಲ್ಲೇಖ:**
1. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಅ.ಜ್ಞಾ. ಪತ್ರದ ಸಂಖ್ಯೆ: ಇ-ಆಫೀಸ್-1840947, ದಿನಾಂಕ: 15.06.2026.
2. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಅ.ಜ್ಞಾ. ಪತ್ರದ ಸಂಖ್ಯೆ: ಇ-ಆಫೀಸ್ ಕಡತ -2152706, ದಿನಾಂಕ: 10.07.2026.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026 ಬೆಂಗಳೂರು, ದಿನಾಂಕ: 13.05.2026.
4. ಈ ಕಛೇರಿ ಇ-ಆಫೀಸ್ ಕಡತ ಸಂಖ್ಯೆ: 68645 ರ ಕಂಡಿಕೆ: 08 ರಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರು ಅನುಮೋದಿಸಿರುವಂತೆ.

**&**

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ಮತ್ತು (2) ರನ್ವಯ ಚಿಕ್ಕಬಳ್ಳಾಪುರ ಜಿಲ್ಲೆಯ ಆರೋಗ್ಯ ಇಲಾಖೆಯಲ್ಲಿ ಮಂಜೂರಾಗಿ ಖಾಲಿ ಇರುವ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅಗತ್ಯ ಕ್ರಮವಹಿಸುವಂತೆ ಆದೇಶಿಸಲಾಗಿರುತ್ತದೆ. ಆದುದರಿಂದ, ಸದರಿ ಹುದ್ದೆಗಳನ್ನು ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಮಾತ್ರ ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳ ಅರ್ಜಿಗಳನ್ನು ಆನ್‌ಲೈನ್ ಮೂಲಕ ನಿಯಮಾನುಸಾರ ಆಹ್ವಾನಿಸಲಾಗಿರುತ್ತದೆ.

ವಿಶೇಷ ಸೂಚನೆಗಳು:-

1. ದಿನಾಂಕ: **24-08-2026** ರಿಂದ **03-09-2026** ರ **ಬೆಳಗ್ಗೆ 11.00** ಗಂಟೆಯೊಳಗಾಗಿ **https://chikkaballapur.nic.in** ವೆಬ್‌ಸೈಟ್‌ನಲ್ಲಿ ವಿವರಗಳನ್ನು ಪಡೆದು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.
2. **ಕ್ರ.ಸಂ. 1 (ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ) ಮತ್ತು ಕ್ರ.ಸಂ. 2 (ಫಾರ್ಮಾಸಿ ಅಧಿಕಾರಿ) ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ: 04.09.2026 ರಂದು ಬೆಳಗ್ಗೆ 11.00 ಗಂಟೆಗೆ ಮೂಲ ದಾಖಲೆಗಳ ಪರಿಶೀಲನೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಗೆ ಹಾಜರಾಗತಕ್ಕದ್ದು, ಸಂಜೆ: 4.00 ಗಂಟೆ ನಂತರ ಬಂದಂತಹ ಅಭ್ಯರ್ಥಿಗಳನ್ನು ತಿರಸ್ಕರಿಸಲಾಗುವುದು.**

ಪು.ತಿ.ನೋ

3. **ಕ್ರ.ಸಂ. 3 (ಶುಶ್ರೂಷಾಧಿಕಾರಿ) ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ: 05.09.2026 ರಂದು ಬೆಳಗ್ಗೆ 11.00 ಗಂಟೆಗೆ ಮೂಲ ದಾಖಲೆಗಳ ಪರಿಶೀಲನೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಗೆ ಹಾಜರಾಗತಕ್ಕದ್ದು, ಸಂಜೆ: 4.00 ಗಂಟೆ ನಂತರ ಬಂದಂತಹ ಅಭ್ಯರ್ಥಿಗಳನ್ನು ತಿರಸ್ಕರಿಸಲಾಗುವುದು.**
4. ಕೆಳಕಂಡ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿದ್ದು, ಕಿಯೋನಿಕ್ಸ್ ಸಂಸ್ಥೆ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು,
5. ಮೂಲ ದಾಖಲಾತಿಗಳ ಪರಿಶೀಲಾನೆಗೆ ಕಡ್ಡಾಯವಾಗಿ ಒಂದು ಸೆಟ್ ಜೆರಾಕ್ಸ್ (ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಆಧಾರ್ ಜೆರಾಕ್ಸ್ ಪ್ರತಿ, ಕಂಪ್ಯೂಟರ್ ಸಾಕ್ಷರತಾ ಪ್ರಮಾಣ ಪತ್ರ, ಜನ್ಮ ದಿನಾಂಕ ದೃಢೀಕರಣ ಪ್ರತಿ {ಎಸ್.ಎಸ್.ಎಲ್.ಸಿ ಅಂಕ ಪಟ್ಟಿ} ಮತ್ತು ವಿಳಾಸ ದೃಢೀಕರಣ ಪತ್ರ ಒಳಗೊಂಡಂತೆ) ಪ್ರತಿಗಳೊಂದಿಗೆ ನಿಗಧಿತ ಸಮಯದೊಳಗಾಗಿ ಹಾಜರಾಗುವುದು.
6. **ಮೂಲ ದಾಖಲೆಗಳ ಪರಿಶೀಲನೆಗೆ ಮೂಲ ದಾಖಲೆಗಳು ಹಾಜರು ಪಡಿಸದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
7. ಮೂಲ ದಾಖಲಾತಿ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಇಲಾಖೆ ವತಿಯಿಂದ ಯಾವುದೇ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ನೀಡಲಾಗುವುದಿಲ್ಲ.

| Sl.N | Post | Head of Account | Qualification | Vacant |
|---|---|---|---|---|
| 1 | **Junior Laboratary Technical Officer** (ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ) | 2210-01-110-1-22-034 | ಡಿಪ್ಲೋಮಾ ಇನ್ ಲ್ಯಾಬೋರೆಟರಿ ತಾಂತ್ರಿಕ ವಿದ್ಯಾರ್ಹತೆಯನ್ನು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು<br>ಅಭ್ಯರ್ಥಿಯ ವಯಸ್ಸು 45 ವರ್ಷ ಒಳಗಿರತಕ್ಕದ್ದು<br>ಉಲ್ಲೇಖ(3) ರನ್ವಯ ಮೀಸಲಾತಿ ಬಿಂದು 1 ರಿಂದ 23 ರವರೆಗೆ | 23 |

| ಪ್ರವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಸಾಮಾನ್ಯ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಅಂಗವಿಕಲ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 11 | 2 | 4 | 3 | 1 | 0 | 0 | 1 | 11 |
| ಪರಿಶಿಷ್ಟ ಜಾತಿ | 4 | 3 | 1 | 0 | 0 | 0 | 0 | 0 | 4 |
| ಪರಿಶಿಷ್ಟ ಪಂಗಡ | 1 | 1 | 0 | 0 | 0 | 0 | 0 | 0 | 1 |
| ಪ್ರವರ್ಗ-1 | 1 | 1 | 0 | 0 | 0 | 0 | 0 | 0 | 1 |
| ಪ್ರವರ್ಗ-11 (ಎ( | 3 | 1 | 1 | 1 | 0 | 0 | 0 | 0 | 3 |
| ಪ್ರವರ್ಗ-11 (ಬಿ( | 1 | 1 | 0 | 0 | 0 | 0 | 0 | 0 | 1 |
| ಪ್ರವರ್ಗ-111 (ಎ( | 1 | 1 | 0 | 0 | 0 | 0 | 0 | 0 | 1 |
| ಪ್ರವರ್ಗ-111 (ಬಿ( | 1 | 1 | 0 | 0 | 0 | 0 | 0 | 0 | 1 |
| ಒಟ್ಟು | 23 | 11 | 6 | 4 | 1 | 0 | 0 | 1 | 23 |

**ಪು.ತಿ.ನೋ**

| | | | | |
|---|---|---|---|---|
| 2 | Pharmacy Officer<br>ಫಾರ್ಮಾಸಿ ಅಧಿಕಾರಿ | 2210-01-110-1-22-034 | ಡಿ-ಫಾರ್ಮಾ ವಿದ್ಯಾರ್ಹತೆಯನ್ನು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು ಹಾಗೂ ಡಿ-ಫಾರ್ಮಾ ಅಭ್ಯರ್ಥಿಗಳು ಕರ್ನಾಟಕ ಫಾರ್ಮಾಸಿ ಕೌನ್ಸಿಲಿಂಗ್‌ನಲ್ಲಿ ಕಡ್ಡಾಯವಾಗಿ ನೋಂದಣಿಯಾಗಿರಬೇಕು<br>ಅಭ್ಯರ್ಥಿಯ ವಯಸ್ಸು 45 ವರ್ಷ ಒಳಗಿರತಕ್ಕದ್ದು | 7 |
| 3 | Nursing Officer<br>ಶುಶ್ರೂಷಾಧಿಕಾರಿಗಳು | 2210-01-110-1-22-034 | ನರ್ಸಿಂಗ್ ವಿದ್ಯಾರ್ಹತೆಯನ್ನು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು ಹಾಗೂ ಡಿ-ಫಾರ್ಮಾ ಅಭ್ಯರ್ಥಿಗಳು ಕರ್ನಾಟಕ ನರ್ಸಿಂಗ್ ಕೌನ್ಸಿಲಿಂಗ್‌ನಲ್ಲಿ ಕಡ್ಡಾಯವಾಗಿ ನೋಂದಣಿಯಾಗಿರಬೇಕು<br>ಅಭ್ಯರ್ಥಿಯ ವಯಸ್ಸು 45 ವರ್ಷ ಒಳಗಿರತಕ್ಕದ್ದು | 15 |

**ಷರತ್ತು ಮತ್ತು ನಿಬಂಧನೆಗಳು:-**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 06 ಸೇನೆನಿ 2024, ದಿನಾಂಕ: 20.05.2024 ರನ್ವಯ 20 ಹುದ್ದೆಗಳಿಗಿಂತ ಹೆಚ್ಚು ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯುವ ಸಮಯದಲ್ಲಿ ಮೀಸಲಾತಿಯನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
2. ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ಹೊರಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ನಿಗಧಿಪಡಿಸಲಾಗಿರುತ್ತದೆ.
3. ಗುತ್ತಿಗೆ ಆಧಾರದ ನೌಕರರ ಯಾವುದೇ ಆಯ್ಕೆಯನ್ನು ಆಯ್ಕೆ ಸಮಿತಿ ನಿರ್ಧಾರದಂತೆ ಅನುಮೋದನೆ ಇಲ್ಲದೆ ಮಾಡುವಂತಿಲ್ಲ.
4. ಅಭ್ಯರ್ಥಿಗಳಿಗೆ ಈ ಗುತ್ತಿಗೆಯು ಒಂದು ವರ್ಷದ ಅವಧಿಗೆ (ದಿನಾಂಕ: 31.03.2027 ರವರೆಗೆ) ನೇಮಕಾತಿ ಎಂದು ತಿಳಿಸತಕ್ಕದ್ದು.
5. ಮೀಸಲಾತಿ ಕೋರುವ ಅಭ್ಯಿಗಳು ಅದಕ್ಕೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಂರ್ಶನಕ್ಕೆ ಹಾಜರಾದ ದಿನದಂದು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಹಾಗೂ ಸದರಿ ಪ್ರಮಾಣ ಪತ್ರವು ವ್ಯಾಲಿಡಿಟಿ ಅವಧಿ ಹೊಂದಿರತಕ್ಕದ್ದು. ವ್ಯಾಲಿಡಿಟಿ ಮುಗಿದ ಪ್ರಮಾಣ ಪತ್ರಗಳನ್ನು ಸಲ್ಲಿಸಿದ ಪಕ್ಷದಲ್ಲಿ ಅಂತಹ ಅಭ್ಯರ್ಥಿಯನ್ನು ತಿರಸ್ಕರಿಸಲಾಗುವುದು.
6. ಗ್ರಾಮೀಣ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು 01 ರಿಂದ 10 ನೇ ತರಗತಿವರೆಗೂ ಕಡ್ಡಾಯವಾಗಿ ಮೂಲ ದಾಖಲೆಗಳನ್ನು ಸಂದರ್ಶನಕ್ಕೆ ಹಾಜರು ಪಡಿಸತಕ್ಕದ್ದು.
7. ಮಾಜಿ ಸೈನಿಕ, ಯೋಜನಾ ನಿರಾಶ್ರಿತರು, ಅಂಗವಿಕಲ ಅಭ್ಯರ್ಥಿಗಳು ಸಂಬಂಧ ಪಟ್ಟ ಸರ್ಕಾರರದಿಂದ ನೀಡಿರುವ ದಾಖಲೆಗಳನ್ನು ಕಡ್ಡಾಯವಾಗಿ ಮೂಲ ದಾಖಲೆಗಳನ್ನು ಸಂದರ್ಶನಕ್ಕೆ ಹಾಜರು ಪಡಿಸತಕ್ಕದ್ದು.
8. ಹುದ್ದೆಗಳಿಗೆ ಸೂಚಿಸಿದ ವಿದ್ಯಾರ್ಹತೆ ಇಲ್ಲದಿರುವುದು ಹಾಗೂ ಫಲಿತಾಂಶಕ್ಕೆ ಕಾಯುತ್ತಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದಿಲ್ಲ.
9. ಗುತ್ತಿಗೆ ಆಧಾರದ ಮೇಲೆ ಆಯ್ಕೆಗೊಂಡ ಸಿಬ್ಬಂದಿಯವರು ಖಾಯಂ ನೇಮಕಾತಿಗಾಗಲೀ, ವಿಶ್ರಾಂತಿ ವೇತನಕ್ಕಾಗಲೀ, ನಿವೃತ್ತ ಉಪದಾನ, ವೇತನ ಶ್ರೇಣಿ ಅಥವಾ ಇನ್ನಿತರ ಯಾವುದೇ ಭತ್ಯೆಗಳನ್ನು ಪಡೆಯಲು ಹಕ್ಕನ್ನು ಹೊಂದಿರುವುದಿಲ್ಲ. ಮತ್ತು ಅರ್ಹರಿರುವುದಿಲ್ಲ ಹಾಗೂ ಈ ಕುರಿತು ನ್ಯಾಯಾಲಯದಲ್ಲಿ ಪ್ರಶ್ನಿಸುವಂತಿಲ್ಲ.
10. ಆಯ್ಕೆಯನ್ನು ನಿರ್ದಿಷ್ಟ ಸ್ಥಳಗಳಿಗೆ ಮಾಡಿಕೊಳ್ಳುವುದರಿಂದ, ಅಭ್ಯರ್ಥಿಯ ಬೇಡಿಕೆಯ ಮೇಲೆ ಬೇರೆ ಯಾವುದೇ ಸ್ಥಳಕ್ಕೆ ವರ್ಗಾವಣೆಗಾಗಲೀ/ಪರಸ್ಪರ ವರ್ಗಾವಣೆಗಾಗಲೀ ಅಥವಾ ನಿಯೋಜನೆಗಾಗಲೀ ಅವಕಾಶವಿರುವುದಿಲ್ಲ.
11. ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಯಾವುದೇ ನಿರ್ಧಾರವನ್ನು ಕೈಗೊಳ್ಳುವ ಅಧಿಕಾರವನ್ನು ನೇಮಕಾತಿ ಸಮಿತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಮಾತ್ರ ಹೊಂದಿರುತ್ತದೆ.

ಪು.ತಿ.ನೋ

12. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಕೆ.ಎನ್.ಸಿ ಪ್ರಮಾಣ ಪತ್ರ ಹಾಗೂ ಪ್ಯಾರಾ ಮೆಡಿಕಲ್ ಪ್ರಮಾಣ ಪತ್ರವನ್ನು ಮೂಲ ದಾಖಲೆಗಳ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು, ವ್ಯಾಲಿಡಿಟಿ ಮುಗಿದ ಪ್ರಮಾಣ ಪತ್ರಗಳನ್ನು ಸಲ್ಲಿಸಿದ ಪಕ್ಷದಲ್ಲಿ ಅಂತಹ ಅಭ್ಯರ್ಥಿಯನ್ನು ತಿರಸ್ಕರಿಸಲಾಗುವುದು.
13. ಮೂಲ ದಾಖಲಾತಿಗಳ ಪರಿಶೀಲನೆ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದ ವಿವರಗಳನ್ನು https://chikkaballapur.nic.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿರುತ್ತದೆ.

**ಆಯ್ಕೆ ಸಮಿತಿಯು ಕೆಳಕಂಡ ಸದಸ್ಯರುಗಳನ್ನು ಒಳಗೊಂಡಿರುತ್ತದೆ:**

- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಅಧ್ಯಕ್ಷರು ಜಿ
- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು -ಸದಸ್ಯ ಕಾರ್ಯದರ್ಶಿ
- ಸಂಬಂಧಪಟ್ಟ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಸದಸ್ಯರು
- ಪ್ರಾಂಶುಪಾಲರು, ಜಿಲ್ಲಾ ತರಬೇತಿ ಕೇಂದ್ರ ಸದಸ್ಯರು
- ಜಿಲ್ಲಾ ಶಸ್ತ್ರ ಚಿಕಿತ್ಸಕರು/ವೈದ್ಯಕೀಯ ಅಧಿಕ್ಷಕರು ಸದಸ್ಯರು
- ಆರ್.ಸಿ.ಹೆಚ್. ಅಧಿಕಾರಿಗಳು - ಸದಸ್ಯರು

14. ಅಭ್ಯರ್ಥಿಯು ಕೆಲಸಕ್ಕೆ, ಹಾಜರಾಗುವಾಗ ಮೂಲ ದಾಖಲೆಗಳನ್ನು ಅಂದರೆ ವಿದ್ಯಾರ್ಹತೆಯ ಅಂಕಪಟ್ಟಿ, ಜನ್ಮ ದಿನಾಂಕದ ದಾಖಲೆ ಇತ್ಯಾದಿಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಮುಂದೆ ಹಾಜರುಪಡಿಸತಕ್ಕದ್ದು.
15. ಗುತ್ತಿಗೆ ಆಧಾರದ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿಯರನ್ನು ಯಾವುದೇ ಸಮಯದಲ್ಲಿ ಯಾವುದೇ ಕಾರಣವಿಲ್ಲದೆ ಒಂದು ತಿಂಗಳ ನೋಟಿಸ್ ನೀಡಿ ಕರ್ತವ್ಯದಿಂದ ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟಿರುತ್ತದೆ.
16. ಕಾರ್ಯಕ್ಷಮತೆಯ ಬಗ್ಗೆ, ದೂರು ಬಂದಲ್ಲಿ ಒಂದು ವಾರದ ನೋಟೀಸ್ ಕೊಟ್ಟು ಅಭ್ಯರ್ಥಿಗೆ ಸ್ಪಷ್ಟನೆ ನೀಡಲು ಅವಕಾಶ ನೀಡಿ ಕರ್ತವ್ಯದಿಂದ ಬಿಡುಗಡೆ ಮಾಡುವುದು.
17. ದುರ್ನಡತೆಯಿಂದಾಗಿ ನಷ್ಟ ಉಂಟಾದಲ್ಲಿ ಅದನ್ನು ಸರ್ಕಾರಕ್ಕೆ ತುಂಬಿಕೊಡುವ ಷರತ್ತಿಗೆ ಬದ್ಧರಾಗಿರಬೇಕು.
18. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯವು ಕಾಲಕಾಲಕ್ಕೆ ವಹಿಸಿದ ಕರ್ತವ್ಯ ಜವಾಬ್ದಾರಿಗಳನ್ನು ಅವರುಗಳು ತಪ್ಪದೇ ನಿರ್ವಹಿಸತಕ್ಕದ್ದು.
19. ಗುತ್ತಿಗೆ ಆಧಾರದ ಮೇಲೆ ಆಯ್ಕೆಗೊಂಡ ಗುತ್ತಿಗೆ ಆಧಾರದ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿ/ಗಳು ಖಾಯಂ ನೇಮಕಾತಿಗಾಗಲೀ, ವಿಶ್ರಾಂತಿ ವೇತನಕ್ಕಾಗಲೀ, ನಿವೃತ್ತ ಉಪದಾನ, ವೇತನ ಶ್ರೇಣಿ ಅಥವಾ ಇನ್ನಿತರ ಯಾವುದೇ ಆರ್ಥಿಕ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ ಹಾಗೂ ಈ ಕುರಿತು ಮಾನ್ಯ ನ್ಯಾಯಾಲಯದಲ್ಲಿ ಪ್ರಶ್ನಿಸುವಂತಿಲ್ಲ. ಆಯ್ಕೆಯನ್ನು ನಿರ್ದಿಷ್ಟ ಸ್ಥಳಗಳಿಗೆ ಮಾಡಿಕೊಳ್ಳುವುದರಿಂದ, ಅಭ್ಯರ್ಥಿಯ ಬೇಡಿಕೆಯ ಮೇಲೆ ಬೇರೆ ಯಾವುದೇ ಸ್ಥಳಕ್ಕೆ ವರ್ಗಾವಣೆಗಾಗಲೀ/ಪರಸ್ಪರ ವರ್ಗಾವಣೆಗಾಗಲೀ ಅಥವಾ ನಿಯೋಜನೆಗಾಗಲೀ ಅವಕಾಶವಿರುವುದಿಲ್ಲ.

ಪು.ತಿ.ನೋ

**20. ಗುತ್ತಿಗೆ ನೌಕರರಿಗೆ ರಜೆ ಸೌಲಭ್ಯ:**

- ರಾಷ್ಟ್ರೀಯ ಆರೋಗ್ಯ ಅಭಿಯಾನದ ಸುತ್ತೋಲೆ ದಿನಾಂಕ:10.02.2023ರಲ್ಲಿ ಉಲ್ಲೇಖಿಸಿರುವಂತೆ ಸಿಬ್ಬಂದಿಗಳ ರಜಾ ಸೌಲಭ್ಯವನ್ನು ಸದರಿ ಗುತ್ತಿಗೆ ಆಧಾರದ ನೇಮಕಾತಿಗೆ ವಿಸ್ತರಿಸಲಾಗಿದೆ. ಆಯ್ಕೆ ಹೊಂದಿದ ಸಿಬ್ಬಂದಿಗಳು ತಾತ್ಕಾಲಿಕ ಸರ್ಕಾರಿ ನೌಕರರಿಗೆ ಸಿಗುವ ರಜೆಗಳನ್ನು ಪಡೆಯಲು ಮಾತ್ರ ಅರ್ಹರಿರುತ್ತಾರೆ. ಅಂದರೆ, ಪ್ರತಿಯೊಂದು ತಿಂಗಳ ಪೂರ್ಣ ಪ್ರಮಾಣದ ಸೇವೆ ಪೂರೈಸಿದರೆ ಒಂದು ದಿನ ಸಾಂದರ್ಭಿಕ ರಜೆ ಗಳಿಕೆಯಾಗುತ್ತದೆ. ಅಂತಹ ರಜೆಯನ್ನು ಬಿಡಿಯಾಗಿ ಅಥವಾ ಒಟ್ಟಾಗಿ ಮೇಲಾಧಿಕಾರಿಗಳ ಅಪ್ಪಣೆಯಂತೆ ಪಡೆಯಬಹುದು. ರಜೆಯನ್ನು ತಮ್ಮ ಹಕ್ಕನ್ನಾಗಿ ಕೇಳಿಪಡೆಯುವಂತಿಲ್ಲ,
- ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಹೊಂದಿರುವ ಸಿಬ್ಬಂದಿಗಳು ಒಂದು ವರ್ಷದಲ್ಲಿ 10 ದಿನಗಳ ವೈದ್ಯಕೀಯ ಆಧಾರದ ಮೇಲೆ ರಜೆ ಪಡೆಯಲು ಅರ್ಹರಿರುತ್ತಾರೆ.
- ಮಹಿಳಾ ಸಿಬ್ಬಂದಿಗಳು 180 ದಿನಗಳ ವೇತನ ಸಹಿತ ಪ್ರಸೂತಿ ರಜೆ ಪಡೆಯಲು ಅರ್ಹರಿರುತ್ತಾರೆ (ಜೀವಂತ ಮೊದಲೆರಡು ಹೆರಿಗೆಗಳಿಗೆ ಮಾತ್ರ).
- ಪುರುಷ ನೌಕರರು ಪತ್ನಿಗೆ ಹೆರಿಗೆಯಾದ ದಿನಾಂಕದಿಂದ 15 ದಿವಸಗಳ ಪಿತೃತ್ವ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ.
- ಗರ್ಭಸ್ರಾವ ಅಥವಾ ಗರ್ಭಪಾತದಿಂದ ಗರ್ಭಧಾರಣೆಯು ಪರ್ಯಾವಸಾನಗೊಂಡ ಸಂದರ್ಭದಲ್ಲಿ ಮಾತೃತ್ವ ರಜೆಯು 6 ವಾರಗಳನ್ನು ಮೀರಬಾರದು. ಇಂತಹ ರಜೆಗಾಗಿ ಸಲ್ಲಿಸಿದ ಅರ್ಜಿಯು ನೋಂದಾಯಿತ ವೃತ್ತಿನಿರತ ವೈದ್ಯರಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರದಿಂದ ಸಮರ್ಥಿತವಾಗಿರಬೇಕು.
- ಮಾತೃತ್ವ ರಜೆಯ ಮೇಲೆ ತೆರಳುವ ಸಿಬ್ಬಂದಿಗಳಿಗೆ ರಜೆಯ ನಿಕಟಪೂರ್ವದಲ್ಲಿ ಪಡೆಯುತ್ತಿದ್ದ ವೇತನಕ್ಕೆ ಸಮನಾದ ವೇತನವನ್ನು ರಜೆಯ ಅವಧಿಯಲ್ಲಿ ಪಡೆಯಲು ಅರ್ಹರಿರುತ್ತಾರೆ.
- ಎರಡಕ್ಕಿಂತ ಹೆಚ್ಚು ಜೀವಂತ ಮಕ್ಕಳನ್ನು ಹೊಂದಿರುವ ಮಹಿಳಾ ಸಿಬ್ಬಂದಿಗಳಿಗೆ ಈ ಮಾತೃತ್ವ ರಜೆಯನ್ನು ಮಂಜೂರು ಮಾಡತಕ್ಕದಲ್ಲ.
- ಮಾತೃತ್ವ ರಜೆಗಾಗಿ ಸಲ್ಲಿಸುವ ಅರ್ಜಿಯೊಂದಿಗೆ ಸಂಬಂಧಿತ ಮಹಿಳಾ ಸಿಬ್ಬಂದಿಗಳು ಈ ಕುರಿತು ಸ್ವಯಂ-ಘೋಷಣೆಯನ್ನು ಮಾತೃತ್ವ ರಜೆಯನ್ನು ಮಂಜೂರು ಮಾಡುವ ಅಧಿಕಾರಿಗೆ ಸಲ್ಲಿಸತಕ್ಕದ್ದು.
- ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಮಹಿಳಾ ಸಿಬ್ಬಂದಿಗಳಿಗೆ ಗರಿಷ್ಠ 180 ದಿನಗಳವರೆಗೆ ಮಾತೃತ್ವ ರಜೆಯನ್ನು ಈ ಕೆಳಕಂಡಂತೆ ನಿಯತಗೊಳಿಸತಕ್ಕದ್ದು.
    - ಶ್ರೀಮತಿ X ಇವರ ಒಪ್ಪಂದದ ಅವಧಿ ದಿನಾಂಕ:15.07.2021 ರಿಂದ ಪ್ರಾರಂಭವಾಗಿ ದಿನಾಂಕ: 14.07.2022ಕ್ಕೆ ಮುಕ್ತಾಯವಾಗುತ್ತದೆ. ಅವರು ದಿನಾಂಕ: 01.05.2022 ರಂದು ಮಾತೃತ್ವ ರಜೆಯ ಮೇಲೆ ತೆರಳಿದ್ದಲ್ಲಿ ಹಾಗೂ ಅವರ ಗುತ್ತಿಗೆ ಅವಧಿಯು ವಿಸ್ತರಿಸಲ್ಪಡದಿದ್ದಲ್ಲಿ ಅವರ ಮಾತೃತ್ವ ರಜೆಯ ಅವಧಿಯನ್ನು ಒಪ್ಪಂದದ ಗರಿಷ್ಠ ಅವಧಿಯವರೆಗೆ ಅಂದರೆ ದಿನಾಂಕ:14,07.2022 ರವರೆಗೆ ಸೀಮಿತಗೊಳಿಸತಕ್ಕದ್ದು.
- ಒಂದು ವೇಳೆ ಅವರ ಗುತ್ತಿಗೆ ಅವಧಿಯು ವಿಸ್ತರಿಸಲ್ಪಟ್ಟಲ್ಲಿ ಆಗ ಅವರು ಗರಿಷ್ಠ 180 ದಿನಗಳ ಮಾತೃತ್ವ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ,

ಪು.ತಿ.ನೋ

21. ಆಯ್ಕೆ ಹೊಂದಿದ ಗುತ್ತಿಗೆ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಕ್ಕೆ ಇಲಾಖೆಯ "ವತಿಯಿಂದ ಖಾಯಂ ನೌಕರರು ಬಂದಲ್ಲಿ ಕರ್ತವ್ಯದಿಂದ ಬಿಡುಗಡೆ ಹೊಂದಲು ತಕರಾರು ಮಾಡುವಂತಿಲ್ಲ ಹಾಗೂ ಈ ಬಗ್ಗೆ, ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅಥವಾ ಇನ್ನಾವುದೇ ನ್ಯಾಯಾಲಯಲ್ಲಿ ದಾವೆ ಹೂಡುವಂತಿಲ್ಲ.
22. ಆಯ್ಕೆ ಹೊಂದಿದ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶ್ರೂಷಾಧಿಕಾರಿ ಕರ್ತವ್ಯಕ್ಕೆ ಹಾಜರಾಗುವ ಮೊದಲು ಮೇಲಿನ ನಿಬಂಧನೆಗಳನ್ನು ಒಪ್ಪಿಕೊಂಡಿರುವಂತೆ ರೂ. 100.00 (ರೂಪಾಯಿ ನೂರುಗಳ) ಛಾಪಾ ಕಾಗದದ ಮೇಲೆ ಮುಚ್ಚಳಿಕೆಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಬರೆದು ಕೊಡತಕ್ಕದ್ದು.
23. ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಶುಶೂಷಾಧಿಕಾರಿಯು ಕೇಂದ್ರ ಸ್ಥಾನದಲ್ಲಿ ವಾಸಿಸತಕ್ಕದ್ದು.

ಸಹಿ/-

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ**
**ಕಲ್ಯಾಣಾಧಿಕಾರಿಗಳು, ಚಿಕ್ಕಬಳ್ಳಾಪುರ**

ಪ್ರತಿಯನ್ನು:-

1. ಮಾನ್ಯ ಅಭಿಯಾನ ನಿರ್ದೇಶಕರು (ಎನ್.ಹೆಚ್.ಎಂ), ಆ.ಕು.ಕ ಸೇವೆಗಳು, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ರವರ ಅವಗಾಹನೆಗೆ ಸಲ್ಲಿಸುತ್ತಾ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
3. ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ರವರ ಅವಗಾಹನೆಗೆ ಸಲ್ಲಿಸುತ್ತಾ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
4. ಮಾನ್ಯ ಮುಖ್ಯ ಆಡಳಿತಾಧಿಕಾರಿಗಳು (ಎನ್.ಹೆಚ್.ಎಂ), ಆ.ಕು.ಕ ಸೇವೆಗಳು, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಜಿಲ್ಲಾ ನೋಡಲ್ ಅಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಜಿಲ್ಲಾ ಮಾಹಿತಿ ಮತ್ತು ತಂತ್ರಜ್ಞಾನ ಅಧಿಕಾರಿಗಳು, ಎನ್.ಐ.ಸಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ರವರಿಗೆ ಸಲ್ಲಿಸುತ್ತಾ ಜಿಲ್ಲಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಕೋರಿದೆ.
7. ಡೀನ್/ನಿರ್ದೇಶಕರು ನಂದಿ ವೈದ್ಯಕೀಯ ಹಾಗೂ ಸಂಶೋಧನಾ ಕೇಂದ್ರ ಚಿಕ್ಕಬಳ್ಳಾಪುರ ರವರ ಮಾಹಿತಿಗಾಗಿ.
8. ಜಿಲ್ಲಾ ಶಸ್ತ್ರಚಿಕಿತ್ಸಕರು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿಗಾಗಿ ರವಾನಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9. ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
10. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿಕ್ಕಬಳ್ಳಾಪುರ ರವರ ಮಾಹಿತಿ ಹಾಗೂ ಅವಗಾಹನೆಗಾಗಿ ಸಲ್ಲಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
11. ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು ಎಲ್ಲಾ ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಕೇಂದ್ರ/ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿಗಾಗಿ ರವಾನಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.
12. ಕಚೇರಿ ಪ್ರತಿ.

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ**
**ಕಲ್ಯಾಣಾಧಿಕಾರಿಗಳು, ಚಿಕ್ಕಬಳ್ಳಾಪುರ**